# Bangalore
# Regional News
# 29.01.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಪ್ರಯಾಗ್‌ರಾಜ್ ಕುಂಭಮೇಳದಲ್ಲಿ ಕಾಲ್ತುಳಿತ ಪ್ರಕರಣ; ರಾಜ್ಯದ ಯಾತ್ರಿಗಳ ರಕ್ಷಣೆಗೆ ಸರ್ಕಾರ ಬದ್ಧ – ಮುಖ್ಯಮಂತ್ರಿ ಸಿದ್ದರಾಮಯ್ಯ
2. ಮೂಡಾ ಹಗರಣ – 300 ಕೋಟಿ ಮೌಲ್ಯದ 160 ನಿವೇಶನ ಮುಟ್ಟುಗೋಲು ಹಾಕಿಕೊಂಡ ಜಾರಿ ನಿರ್ದೇಶನಾಲಯ
3. ಕಂದಾಯ ಇಲಾಖೆಯ 'ಭೂ ಸುರಕ್ಷಾ' ಯೋಜನೆ ಪರಿಣಾಮಕಾರಿಯಾಗಿ ಜಾರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ
4. ಸಣ್ಣ ಹಣಕಾಸು ಸಂಸ್ಥೆಗಳ ದೌರ್ಜನ್ಯ; ಸುಗ್ರಿವಾಜ್ಞೆ ಕರಡು ತಯಾರಿಸಲು ಸರ್ಕಾರದಿಂದ ಇಂದು ಮಹತ್ವದ ಸಭೆ

****************

ಇಂದು ಮೌನಿ ಅಮವಾಸ್ಯೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಇಂದು ವಿಶೇಷವಾದ ದಿನ.

ಕುಂಭ ಮೇಳದಲ್ಲಿ ಭಕ್ತರ ಸಂಖ್ಯೆ ಹೆಚ್ಚಾದ ಕಾರಣ ಜನದಟ್ಟಣೆಯಿಂದ ಕಾಲ್ತುಳಿತ ಉಂಟಾಗಿದೆ. ಎಲ್ಲಾ ಘಾಟ್‌ಗಳಲ್ಲಿ ಭಕ್ತರು ಶಾಂತಿಯುತವಾಗಿ ಪವಿತ್ರ ಸ್ನಾನ ಮಾಡುವುದರೊಂದಿಗೆ ಸಂಗಮದಲ್ಲಿ ಕಾಲ್ತುಳಿತದ ಬಳಿಕ ಪರಿಸ್ಥಿತಿ ನಿಯಂತ್ರಣದಲ್ಲಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಲ್ತುಳಿತದಲ್ಲಿ ಗಾಯಗೊಂಡಿರುವ ರಾಜ್ಯದ ಯಾತ್ರಿಗಳನ್ನು ಕರೆ ತರಲು ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಕುಂಭಮೇಳದಲ್ಲಿ ಪಾಲ್ಗೊಂಡಿರುವ ಕನ್ನಡಿಗರು ಜಾಗರೂಕತೆಯಿಂದ ಇರಿ ಎಂದು ತಿಳಿಸಿದ್ದಾರೆ.

ಬೆಳಗಾವಿಯ ಹಲವು ಯಾತ್ರಾರ್ಥಿಗಳಿಗೂ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮಹ್ಮದ್ ರೋಷನ್ ತಿಳಿಸಿದ್ದಾರೆ. ಟ್ರಾವೆಲ್ ಏಜೆನ್ಸಿ ಮೂಲಕ 30 ಜನರ ತಂಡ ಬೆಳಗಾವಿಯಿಂದ ಪ್ರಯಾಣಿಸಿತ್ತು.

ಯಾತ್ರಾರ್ಥಿಗಳ ಪೋಷಕರು ಭಯ ಪಡುವ ಅಗತ್ಯವಿಲ್ಲ. ಉತ್ತರ ಪ್ರದೇಶದ ಜಿಲ್ಲಾಡಳಿತ ಜೊತೆಗೆ ಬೆಳಗಾವಿ ಜಿಲ್ಲಾಡಳಿತ ಸಂಪರ್ಕದಲ್ಲಿದ್ದು ಮಾಹಿತಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಬೆಳಗಾವಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಾಗಿದ್ದು, ಅಗತ್ಯವಿದ್ದವರು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ. ಸಹಾಯವಾಣಿ ಸಂಖ್ಯೆ **08312407200.**

ಧ್ವನಿ: ಜಿಲ್ಲಾಧಿಕಾರಿ

****************

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ–ಮೂಡಾ ಹಗರಣದ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ 50:50 ಅನುಪಾತ ಸೂತ್ರದ ಅಡಿಯಲ್ಲಿ ನಿಯಮಗಳನ್ನು ಉಲ್ಲಂಘಿಸಿ ವಿವಿಧ ವ್ಯಕ್ತಿಗಳಿಗೆ ಹಂಚಿಕೆ ಮಾಡಲಾದ 160 ನಿವೇಶನಗಳನ್ನು ವಶಪಡಿಸಿಕೊಂಡಿದೆ.

ದೊಡ್ಡ ಮೊತ್ತದ ಹಣ ಒಳಗೊಂಡ ಬೇನಾಮಿ ವಹಿವಾಟುಗಳ ಸೂಚನೆಗಳಿರುವುದರಿಂದ, ಎಲ್ಲಾ ನಿವೇಶನಗಳನ್ನು ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಇ.ಡಿ ತಿಳಿಸಿದೆ.

ಮಾರ್ಗದರ್ಶನ ಮೌಲ್ಯದ ಆಧಾರದ ಮೇಲೆ ಈ ನಿವೇಶನಗಳ ಮೌಲ್ಯ 81 ಕೋಟಿ ರೂಪಾಯಿಗಳಾಗಿದ್ದು, ಅವುಗಳ ಮಾರುಕಟ್ಟೆ ಮೌಲ್ಯ 300 ಕೋಟಿ ರೂಪಾಯಿಗಳನ್ನು ಮೀರಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ತಿಳಿಸಿದೆ.

ರವಿ ಹೆಸರಿನಲ್ಲಿ ನೋಂದಾಯಿಸಲಾದ 31 ನಿವೇಶನಗಳು, ಅಬ್ದುಲ್ ವಾಹಿದ್ ಹೆಸರಿನಲ್ಲಿ 41 ನಿವೇಶನಗಳು, ಕ್ಯಾಥೆಡ್ರಲ್ ಸೊಸೈಟಿ ಹೆಸರಿನಲ್ಲಿ 40 ನಿವೇಶನಗಳು ಮತ್ತು ಇತರ ವ್ಯಕ್ತಿಗಳಿಗೆ ಸೇರಿದ 48 ನಿವೇಶನಗಳನ್ನು ಇಡಿ ವಶಪಡಿಸಿಕೊಂಡಿದೆ.

2023ರ ಅಕ್ಟೋಬರ್ 11ರಂದು ರವಿ ಎಂಬುವವರ ಹೆಸರಿಗೆ 31 ಸೈಟುಗಳು ನೋಂದಣಿ ಆಗಿರುವುದು ಇಡಿ ಕಾರ್ಯಾಚರಣೆ ವೇಳೆ ಬೆಳಕಿಗೆ ಬಂದಿದೆ.

****************

ಭೂ ದಾಖಲೆಗಳ ರಕ್ಷಣೆಗೆ ವಂಚಕರಿಂದ ದುರುಪಯೋಗ ಆಗದಂತೆ ಹಾಗೂ ದಾಖಲೆ ತಿದ್ದಲು ಅವಕಾಶ ನೀಡದಂತೆ ಭೂ ಸುರಕ್ಷಾ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಇಂದು ನಡೆದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಂದಾಯ ನ್ಯಾಯಾಲಯಗಳಲ್ಲಿ ಸಮಾರೋಪಾದಿಯಲ್ಲಿ ಪ್ರಕರಣಗಳ ವಿಲೇವಾರಿ ಆಗಿರುವುದಕ್ಕೆ ಮುಖ್ಯಮಂತ್ರಿ ಸಂತಸ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಬಂದಾಗ 10 ಸಾವಿರಕ್ಕೂ ಹೆಚ್ಚು ಅವಧಿ ಮೀರಿದ ಪ್ರಕರಣಗಳು ಬಾಕಿ ಇದ್ದವು. ಈಗ ಕೇವಲ 369 ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ ಎಂದು ಮುಖ್ಯಮಂತ್ರಿ ಅವರಿಗೆ ದಾಖಲೆ ಸಮೇತ ಸಚಿವ ಕೃಷ್ಣಬೈರೇಗೌಡ ವಿವರಿಸಿದ್ದಾರೆ.

ಇದುವರೆಗೆ ಸುಮಾರು 8 ಕೋಟಿ ಮೂಲ ದಾಖಲೆಗಳ ಕಂಪ್ಯೂಟರೀಕರಣ ಪೂರ್ಣಗೊಳಿಸಲಾಗಿದೆ. ಎಲ್ಲಾ 31 ಜಿಲ್ಲೆಗಳಲ್ಲಿ ದಾಖಲೆಗಳ ಕಂಪ್ಯೂಟರೀಕರಣ ಕಾರ್ಯ ನಡೆಯುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

****************

ಮೈಕ್ರೋಫೈನಾನ್ಸ್ ಸಂಸ್ಥೆಗಳು ದೌರ್ಜನ್ಯ, ತೊಂದರೆ ನೀಡುತ್ತಿರುವ ಕುರಿತು ಪೊಲೀಸರಿಗೆ ದೂರು ನೀಡಿದರೆ ತಕ್ಷಣ ಕ್ರಮ ಕೈಗೊಳ್ಳಲಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ದೂರು ಬಂದ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ. ಸುಮೋಟೊ ಪ್ರಕರಣ ದಾಖಲಿಸುವಂತೆಯೂ ತಿಳಿಸಲಾಗಿದೆ ಎಂದು ಹೇಳಿದ್ದಾರೆ.

ಸುಗ್ರಿವಾಜ್ಞೆ ಕರಡು ತಯಾರಿಸಲು ಸರ್ಕಾರದಿಂದ ಇಂದು ಮಹತ್ವದ ಸಭೆ ನಡೆಯಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತುಮಕೂರಿನ ಭಾಗದಲ್ಲಿ ನಿರ್ಮಾಣವಾದರೆ ಉತ್ತರ ಕರ್ನಾಟಕ ಭಾಗದ 21 ಜಿಲ್ಲೆಗಳಿಗೂ ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನವರೆಗೆ ಮೆಟ್ರೋ ಯೋಜನೆ ಡಿಪಿಆರ್ ಇನ್ನು ಅಂತಿಮವಾಗಿಲ್ಲ ಎಂದು ತಿಳಿಸಿದ್ದಾರೆ.

****************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ–ಇಸ್ರೋ ಇಂದು ಆಂಧ್ರಪ್ರದೇಶದ ಶ್ರೀಹರಿಕೋಟಾದಿಂದ ತನ್ನ ಹೊಸ ಪೀಳಿಗೆಯ ಉಪಗ್ರಹ ಎನ್‌ವಿಎಸ್ – 02 ನ್ನು ಯಶಸ್ವಿಯಾಗಿ ಉಡಾವಣೆ ಮಾಡಿತು.

ಜಿಯೋಸಿಂಕ್ರೋನಸ್ ಭೂಕೇಂದ್ರಿತ ಉಪಗ್ರಹ ಉಡ್ಡಯನ ವಾಹನ ರಾಕೆಟ್‌ನಲ್ಲಿ 100ನೇ ಉಪಗ್ರಹವಾದ ಎನ್‌ವಿಎಸ್–2 ದಿಕ್ಸೂಚಿ ಉಪಗ್ರಹವನ್ನು ಇಂದು ಬೆಳಿಗ್ಗೆ 6 ಗಂಟೆ 23 ನಿಮಿಷಕ್ಕೆ ಉಡಾವಣೆ ಮಾಡಲಾಯಿತು. ಇದು ನಾವಿಕ್ ಯೋಜನೆಯ ಎರಡನೇ ತಲೆಮಾರಿನ ಉಪಗ್ರಹವಾಗಿದೆ.

ಶ್ರೀಹರಿಕೋಟಾದಿಂದ ಆಗಸ್ಟ್ 10, 1979ರಂದು ಮೊದಲ ರಾಕೆಟ್ ಉಡಾವಣೆಯಾಗಿತ್ತು. ಭಾರತದ ನಾವಿಕ್‌ನಲ್ಲಿ ಏಳು ಉಪಗ್ರಹಗಳಿವೆ.

****************

ಫೆಬ್ರವರಿ 1ರಂದು ಮಂಡನೆಯಾಗಲಿರುವ ಬಜೆಟ್‌ನಲ್ಲಿ ಅಸಂಘಟಿತ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿ ನೌಕರರು, ಅಂಗನವಾಡಿ ಕಾರ್ಯಕರ್ತೆಯರು, ಆಶಾಕಾರ್ಯಕರ್ತೆಯರು, ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಕೌಶಲ್ಯ ರಹಿತ ನೌಕರರಿಗೆ 35 ಸಾವಿರ ಕನಿಷ್ಠ ವೇತನ ನಿಗದಿ ಮಾಡಬೇಕು ಎಂದು ಕೋಲಾರದ ಹಿರಿಯ ಕಾರ್ಮಿಕ ಮುಖಂಡ ಗಾಂಧಿನಗರ ನಾರಾಯಣಸ್ವಾಮಿ ಒತ್ತಾಯಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಮಸೂದೆ ಪ್ರಕಾರ ಮಂಡಳಿ ಸ್ಥಾಪನೆ ಮಾಡಬೇಕು.

ಧ್ವನಿ: ನಾರಾಯಣಸ್ವಾಮಿ

****************

ದಾವಣಗೆರೆ  ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಬೆಳೆದ ಕಡಲೆಕಾಳು ಉತ್ಪನ್ನವನ್ನು ರೈತರಿಂದ ನೇರವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಗೆ  ನೊಂದಣಿ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ್ದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಉತ್ತಮ ಗುಣಮಟ್ಟದ ಕಡಲೆಕಾಳಿಗೆ ಪ್ರತಿ ಕ್ವಿಂಟಾಲ್‌ಗೆ 5 ಸಾವಿರದ 650 ರೂಪಾಯಿ ನಿಗದಿಪಡಿಸಲಾಗಿದೆ. ಜಗಳೂರು ಮತ್ತು ಚನ್ನಗಿರಿ ಎಪಿಎಂಸಿ ಆವರಣದಲ್ಲಿ ರೈತರ ನೊಂದಣಿ ಕಾರ್ಯ ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದ್ದಾರೆ.

****************

ಐತಿಹಾಸಿಕ ಮುಡುಕುತೊರೆ ಜಾತ್ರಾ ಮಹೋತ್ಸವ ಇದೇ 31ರಿಂದ ಫೆಬ್ರವರಿ 16ರವರೆಗೆ  ನಡೆಯಲಿದ್ದು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಸೂಚಿಸಿದ್ದಾರೆ.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಡುಕುತೊರೆ ಜಾತ್ರಾ ಮಹೋತ್ಸವದ ಮುಂಜಾಗೃತಾ ಕುರಿತಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, 17 ದಿನಗಳ ಕಾಲ ಜಾತ್ರಾ ಮಹೋತ್ಸವ ನಡೆಯಲಿದೆ. ಅಧಿಕಾರಿಗಳು ಯಾವುದೇ ತೊಂದರೆ ಆಗದಂತೆ ಮುಂಜಾಗೃತಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

****************

ಸಂಚಾರಿ ನಿಯಮಗಳ ಪಾಲನೆಯಿಂದ ಮಾತ್ರ ಅಪಘಾತಗಳ ಪ್ರಮಾಣ ತಗ್ಗಿಸಲು ಸಾಧ್ಯ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ತಿಳಿಸಿದ್ದಾರೆ.

ದಾವಣಗೆರೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯಿಂದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಸಾರಿಗೆ ಅಧಿಕಾರಿ ಅಬ್ದುಲ್ ಖಾಲಿದ್ ಮಾತನಾಡಿ, ರಸ್ತೆ ನಿಯಮಗಳ ಪಾಲನೆಗೆ ಪದವಿ ಪಡೆಯುವ ಅಗತ್ಯವಿಲ್ಲ. ಪ್ರತಿಯೊಬ್ಬರು ಸಾರಿಗೆ ನಿಯಮಗಳನ್ನು ಪಾಲಿಸಬೇಕೆಂದು ಕರೆ ನೀಡಿದ್ದಾರೆ.

ಧ್ವನಿ: ಸಾರಿಗೆ ಅಧಿಕಾರಿ ಖಾಲಿದ್

********ಮುಕ್ತಾಯ********